# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಪ್ರಶ್ನೆ ಸಂಖ್ಯೆ | 696 |
| ಸದಸ್ಯರ ಹೆಸರು | ಶ್ರೀ ಶರಣಗೌಡ ಬಯ್ಯಾಪುರ |
| ಉತ್ತರಿಸಬೇಕಾದ ದಿನಾಂಕ | 19-09-2022 |
| ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ, ಲಿಂಗಸಗೂರು ತಾಲ್ಲೂಕಿನ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರು ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಪ್ರಸೂತಿ ಆರೈಕೆ ಮತ್ತು ಸ್ತ್ರೀರೋಗ ತಜ್ಞರ ಹುದ್ದೆಯನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; (ಮಾಹಿತಿ ನೀಡುವುದು) | ಲಿಂಗಸುಗೂರು ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಗಳ ವೈದ್ಯ/ ತಜ್ಞ ವೈದ್ಯ ಹುದ್ದೆಗಳ ವಿವರ ಈ ಕೆಳಕಂಡಂತೆ ವಿವರಿಸಿದೆ.<br>ಸಾರ್ವಜನಿಕ ಆಸ್ಪತ್ರೆ: ಮಂಜೂರು 14, ಕಾರ್ಯನಿರತ 10, ಖಾಲಿ ಹುದ್ದೆ 4<br>ಸಾರ್ವಜನಿಕ ಆಸ್ಪತ್ರೆ, ಲಿಂಗಸಗೂರುನಲ್ಲಿ 01 ಸ್ತ್ರೀರೋಗ ತಜ್ಞರ ಹುದ್ದೆ ಮಂಜೂರಾಗಿದ್ದು, ಒಬ್ಬರು ಕಾರ್ಯನಿರ್ವಹಿಸುತ್ತಿದ್ದಾರೆ.<br>ಸದರಿ ಆಸ್ಪತ್ರೆಯಲ್ಲಿ 01 ಫಿಜಿಷಿಯನ್, 01 ಮಕ್ಕಳ ತಜ್ಞತೆ ಮತ್ತು 02 ತುರ್ತು ಚಿಕಿತ್ಸಾ ವೈದ್ಯರ(ಸಿಎಂಓ) ಹುದ್ದೆಗಳು ಖಾಲಿಯಿರುತ್ತವೆ. |
| ಇ) | ಇಲ್ಲದಿದ್ದಲ್ಲಿ, ಯಾವಾಗ ಮಾಡಲಾಗುವುದು? | ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ತಜ್ಞತೆ ಹುದ್ದೆಗೆ ನೇಮಿಸಲಾಗುತ್ತಿದೆ. ಎಂಬಿಬಿಎಸ್ ಪದವಿ ಪೂರೈಸಿದ/ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ 1 ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ತಜ್ಞ ವೈದ್ಯ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ತಜ್ಞ ವೈದ್ಯರ ಕೊರತೆಯನ್ನು ನೀಗಿಸಲು ಕ್ರಮಕೈಗೊಳ್ಳಲಾಗುತ್ತಿದೆ. |

ಆಕುಕ 58 ಹೆಚ್‌ಎಸ್‌ಡಿ 2022.

(ಡಾ. ಕೆ ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ವೈದ್ಯಕೀಯ ಶಿಕ್ಷಣ ಸಚಿವರು.